**ಆಲೂರಿನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯದಲ್ಲಿ**

ಸಿಸಿ ನಂ. 2/2021.

| | | |
|---|---|---|
| ಸಾಕ್ಷಿಯ ಹೆಸರು | ವಿನಾಯಕ | ಪಿ.ಡಬ್ಲ್ಯು-4 |
| ತಂದೆಯ ಹೆಸರು | ಲಿಂಗರಾಜು | ಸಿ.ಡಬ್ಲ್ಯು-10 |
| ವಯಸ್ಸು | 30 ವರ್ಷ | |
| ಉದ್ಯೋಗ | ವ್ಯಾಪಾರ | ದಿನಾಂಕಃ 05-10-2023 |
| ವಾಸ | ಜಿ.ತಿಮ್ಮನಹಳ್ಳಿ ಗ್ರಾಮ . | ಪ್ರಮಾಣ ವಚನ ಬೋಧಿಸಲಾಯಿತು. |

ಮುಖ್ಯ ವಿಚಾರಣೆಃ ಎಪಿಪಿ ರವರಿಂದ

ಚಾಸಾ-9 ಮತ್ತು 11 ರವರು ಪರಿಚಯವಿರುವುದಿಲ್ಲ. ನಿಪಿ-5 ರಲ್ಲಿನ ತನ್ನ ಸಹಿಯನ್ನು ನೋಡಿ ಒಪ್ಪಿಕೊಂಡಿದ್ದು, ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಕಳೆದ 1 ವರ್ಷಗಳ ಹಿಂದೆ ಆಲೂರು ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಠಾಣೆಯಲ್ಲಿ ಸಹಿ ಮಾಡಿರುತ್ತೇನೆಂದು ನನಗೆ ತಿಳಿದಿರುವುದಿಲ್ಲ. ನಿಪಿ-8 ರಲ್ಲಿ ತನ್ನನ್ನು ನೋಡಿ ಗುರುತಿಸಿದ್ದು ಯಾವ ಕಾರಣಕ್ಕಾಗಿ ನಿಪಿ-8 ಅನ್ನು ತೆಗೆದಿರುತ್ತಾರೆಂದು ನನಗೆ ಗೊತ್ತಿಲ್ಲ.

( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಸರ್ಕಾರಿ ವಕೀಲರು ಕೇಳಿರುತ್ತಾರೆ. ಸಾಕ್ಷಿಯ ಸಾಕ್ಷ್ಯವನ್ನು ಪರಿಶೀಲಿಸಿ ಪಾಟೀ ಸವಾಲು ಮಾಡಲು ಅವಶ್ಯಕವೆಂದು ಮನಗಂಡು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಎಪಿಪಿ ರವರಿಂದ

ದಿಃ24-08-2020 ರಂದು ಪೋಲೀಸರು ನನ್ನನ್ನು ಠಾಣೆಗೆ ಕರೆಸಿದ್ದರು ಎಂದರೆ ಸರಿಯಲ್ಲ. ವಾಹನದ ಅಮಾನತ್ತು ಪಂಚನಾಮೆ ಬಗ್ಗೆ ನಮಗೆ ತಿಳಿಸಿ ಆನಂತರ ಠಾಣೆಯ ಆವರಣದಲ್ಲಿದ್ದಂತಹ ಕೆಎ-13-ಕೆ-6066 ರ ವಾಹನವನ್ನು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಪೋಲೀಸರು ನನ್ನ ಸಮಕ್ಷಮ ವಾಹನವನ್ನು ಅಮಾನತ್ತುಪಡಿಸಿಕೊಂಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ಆರೋಪಿ ಪರ ವಕೀಲರು ಹಾಜರಿದ್ದು , ಪಾಟೀಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,
ಆಲೂರು.